ಬೆಂಗಳೂರಿನ ಸಂಜಯ ಗಾಂಧಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸುವ ಸೌಲಭ್ಯ.

2338(2933)

ಶ್ರೀ ರಾಮಲಿಂಗಾ ರೆಡ್ಡಿ(ಜಯನಗರ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಸಂಜಯ್‌ಗಾಂಧಿ ಅಪಘಾತ ಮತ್ತು ಪುನರ್ವಸತಿ ಕೇಂದ್ರದಲ್ಲಿ ಅಪಘಾತದಿಂದ ಮರಣ ಹೊಂದಿದವರಿಗೆ ಮರಣೋತ್ತರ ಪರೀಕ್ಷೆ ನಡೆಸುವ ಸೌಲಭ್ಯ ಒದಗಿಸಲಾಗಿದೆಯೇ?

ಆ) ಹಾಗಿಲ್ಲದಿದ್ದಲ್ಲಿ ಕೂಡಲೇ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ

ಆ) ಈ ಕೇಂದ್ರದಲ್ಲಿ ಮರಣೋತ್ತರ ಪರೀಕ್ಷೆ ನಡೆಸುವ ಸೌಲಭ್ಯಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಪ್ರಸ್ತುತ ಇರುವುದಿಲ್ಲ.

ಅರಣ್ಯ ಪ್ರದೇಶದಲ್ಲಿ ವಾಸಿಸುವ ನೌಕರರಿಗೆ ಕುಡಿಯುವ ನೀರು.

2340(3069)

ಶ್ರೀ ಬಸವರಾಜ್ ಮಂಡಿಮಠ್ ಜಿ. (ಚಳ್ಳಕೆರೆ): ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಳ್ಳಕೆರೆ-ಚಿತ್ರದುರ್ಗ ರಸ್ತೆಯ ಚಳ್ಳಕೆರೆ ಮನ್ನೆಜಂಗಲಿ ಸೋಮಗುದ್ದು ಅರಣ್ಯ ಪ್ರದೇಶದಲ್ಲಿ ನೌಕರರ ವಾಸದ ಕಟ್ಟಡಗಳಿರುವ ಪ್ರದೇಶದಲ್ಲಿ ಕುಡಿಯುವ ನೀರಿಗಾಗಿ ಕೊಳವೆ ಬಾವಿಯನ್ನು ಕೊರೆಯಿಸಲಾಗಿದೆಯೇ?

ಆ) ಸದರಿ ಕೊಳವೆ ಬಾವಿಗೆ ವಿದ್ಯುತ್ ಮೋಟಾರ್ ಅಳವಡಿಸಿ ಚಳ್ಳಕೆರೆ ಪಟ್ಟಣದ ಹಲವಾರು ಮನೆಗಳಿಗೆ ಒಂದು ಕಿ.ಮೀ. ಉದ್ದ ಪೈಪುಗಳನ್ನು ಜೋಡಿಸಿ ನೀರು ಸರಬರಾಜು ಮಾಡಿ ಪೋಲು ಮಾಡುತ್ತಿರುವುದು ನಿಜವೇ?

ಇ) ಹಾಗಿದ್ದಲ್ಲಿ ಈ ಕ್ರಮವು ಕಾನೂನು ಬದ್ಧವೇ?